# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2205
ಉತ್ತರಿಸಬೇಕಾದ ದಿನಾಂಕ : 18.03.2022
ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು : ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ತಾಲ್ಲೂಕಿನ ಮಹಾಗಾಂವ್ ಕ್ರಾಸ್ ಹತ್ತಿರ ತಾಲ್ಲೂಕು ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕೆ ಸರ್ಕಾರ ನಿಗಧಿಪಡಿಸಿದ ಅನುದಾನ ಎಷ್ಟು; (ವಿವರ ನೀಡುವುದು) | 2019-20ನೇ ಸಾಲಿನಲ್ಲಿ ಕಲಬುರಗಿ ತಾಲ್ಲೂಕಿನ ಮಹಾಗಾಂವ್ ತಾಲ್ಲೂಕು ಮಟ್ಟದ ಕ್ರೀಡಾಂಗಣದ ಅಭಿವೃದ್ಧಿಗೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ನೆಲಸಮತಟ್ಟು ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ರೂ.1.43 ಕೋಟಿ ಬಿಡುಗಡೆಯಾಗಿದ್ದು. ಪ್ರಸ್ತುತ ಕಾಮಗಾರಿ ಪ್ರಗತಿಯಲ್ಲಿದೆ. |
| ಆ) | ಕ್ರೀಡಾಂಗಣ ನಿರ್ಮಾಣಕ್ಕೆ ಮೀಸಲಿಟ್ಟ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ವಿವರ ನೀಡುವುದು) | ಸದರಿ ಅನುದಾನದಲ್ಲಿ ನೆಲಸಮತಟ್ಟು ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದು, ಪ್ರಸ್ತುತ ಕಾಮಗಾರಿ ಪ್ರಗತಿಯಲ್ಲಿದೆ. |
| ಇ) | ಸದರಿ ಕ್ರೀಡಾಂಗಣವು ಈಗಾಗಲೇ ಕ್ರೀಡಾ ಪಟುಗಳಿಗೆ ಲಭ್ಯವಿದೆಯೇ; ಇಲ್ಲದಿದ್ದಲ್ಲಿ, ಎಂದಿನಿಂದ ಲಭ್ಯವಾಗುವುದು? (ವಿವರ ನೀಡುವುದು) | ಸದರಿ ಕ್ರೀಡಾಂಗಣದಲ್ಲಿ ಪ್ರಸ್ತುತ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವುದರಿಂದ ಕ್ರೀಡಾಪಟುಗಳ ಬಳಕೆಗೆ ಲಭ್ಯ ಇರುವುದಿಲ್ಲ.<br><br>ಸದರಿ ಕ್ರೀಡಾಂಗಣದಲ್ಲಿ ಕೈಗೆತ್ತಿಕೊಳ್ಳಲಾಗಿರುವ ನೆಲಸಮತಟ್ಟು ಕಾಮಗಾರಿಗಳು ಪೂರ್ಣಗೊಂಡ ನಂತರ ಕ್ರೀಡಾಪಟುಗಳ ಬಳಕೆಗೆ ಒದಗಿಸಲಾಗುವುದು. |

**ವೈಎಸ್‌ಡಿ/ಇಬಿಬಿ/66/2022**

**(ಡಾ|| ನಾರಾಯಣಗೌಡ)**
ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.